ಕೊಪ್ಪಳದಲ್ಲಿ ಪಶು ವಿಶ್ವವಿದ್ಯಾನಿಲಯ ಪ್ರಾರಂಭ

1108 (1504) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಶು ವಿಶ್ವವಿದ್ಯಾನಿಲಯ ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ ; ಈ ಬಗ್ಗೆ ತಜ್ಞರ ಅಭಿಪ್ರಾಯ ಕೇಳಲಾಗಿದೆಯೇ ?

ಆ) ಕೊಪ್ಪಳ ಕ್ಷೇತ್ರದ ಮುನಿರಾಬಾದ್ ಫಾರಂನಲ್ಲಿ ವಿಶ್ವವಿದ್ಯಾನಿಲಯ ಪ್ರಾರಂಭಿಸಲು ಸರ್ಕಾರಕ್ಕೆ ಆಲೋಚನೆ ಇದೆಯೇ ; ಇದ್ದರೆ, ಯಾವಾಗ ಪ್ರಾರಂಭಿಸಲಾಗುವುದು ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ) -- ಇದೇ --,

ತಜ್ಞರ ಅಭಿಪ್ರಾಯ ಪಡೆಯಲಾಗಿದೆ.

ಆ) ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸುವ ಬಗ್ಗೆ ಅಥವಾ ಸ್ಥಳದ ಬಗ್ಗೆ ನಿರ್ಧಾರ ಕೈಗೊಂಡಿಲ್ಲ.

ಕೊಪ್ಪಳ ಜಿಲ್ಲೆಯಲ್ಲಿ ಕೈಮಗ್ಗ ಜಿಲ್ಲಾ ಮಟ್ಟದ ಕಛೇರಿ ಪ್ರಾರಂಭ

1109 (1505) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೊಪ್ಪಳ ಜಿಲ್ಲೆಯಲ್ಲಿ ನೇಕಾರರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಸಣ್ಣ ಉದ್ದಿಮೆಯನ್ನು ಅವಲಂಬಿಸಿರುವುದರಿಂದ, ಇವರುಗಳ ಅನುಕೂಲಕ್ಕಾಗಿ ಜಿಲ್ಲಾ ಮಟ್ಟದ ಕೈಮಗ್ಗದ ಕಛೇರಿಯನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

ಆ) ಇದ್ದರೆ ಯಾವಾಗ ಪ್ರಾರಂಭಿಸಲಾಗುತ್ತದೆ ?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು) :

ಅ) ಕೈಮಗ್ಗ ಮತ್ತು ಜವಳಿ ಇಲಾಖೆಯು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಬೇರ್ಪಟ್ಟ ನಂತರ ಎಲ್ಲಾ ಜಿಲ್ಲೆಯಲ್ಲಿ ಕೂಡ ಕೈಮಗ್ಗ ಮತ್ತು ಜವಳಿ ಇಲಾಖೆಯ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಜವಳಿ ಇಲಾಖೆಯನ್ನು ಪುನರ್ ರಚಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದ್ದು, ಇದರಲ್ಲಿ ಕೊಪ್ಪಳ ಜಿಲ್ಲೆಗೆ ಅಧಿಕಾರಿಗಳನ್ನು ನೇಮಿಸುವ ವಿಚಾರವೂ ಇದೆ.

ಆ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿ ಇರುತ್ತದೆ.

ಕೊಪ್ಪಳದಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕಾ ವಸಾಹತು ನಿರ್ಮಾಣ

1110 (1506) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೊಪ್ಪಳದಲ್ಲಿ ಕೆಐಎಡಿಬಿ ವತಿಯಿಂದ ಕೈಗಾರಿಕಾ ವಸಾಹತನ್ನು ನಿರ್ಮಾಣ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ, ಹಾಗಿದ್ದರೆ, ಯಾವಾಗ ಪ್ರಾರಂಭಿಸಲಾಗುತ್ತದೆ ?

ಆ) ಕೊಪ್ಪಳ ಜಿಲ್ಲೆಯಲ್ಲಿ ಹೊಸದಾಗಿ ಯಾವ ಯಾವ ಕೈಗಾರಿಕೆಗಳನ್ನು ಮಂಜೂರು ಮಾಡಲಾಗಿದೆ. ಆ ಕೈಗಾರಿಕೆಗಳ ಬಂಡವಾಳ ಎಷ್ಟು ಸದರಿ ಕೈಗಾರಿಕೆಗಳಲ್ಲಿ ತಯಾರಿಸಲ್ಪಡುವ ಉತ್ಪನ್ನಗಳಾವುವು ?